## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಭೀಮಣ್ಣಾ ಹತ್ಯಾಳ, ಲೆಕ್ಕಾಧೀಕ್ಷಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೀದರ್ ಇವರ ವೈದ್ಯಕೀಯ ವೆಚ್ಚವನ್ನು ಮರುಪಾವತಿಸುವ ಬಗ್ಗೆ–ಆದೇಶ.

**ಓದಲಾಗಿದೆ:**

1. ಮುಖ್ಯ ಇಂಜಿನಿಯರ್, ಗಾ.ಕು.ನೀ.ನೈ. ಇಲಾಖೆ ಬೆಂಗಳೂರು ಇವರ ಪತ್ರ ಸಂಖ್ಯೆ: ಮುಇಂ/ಗ್ರಾಕುನೀ & ನೈಇ /ಸಿ–8/ಸಿಆರ್–05/ 2016–17/21, ದಿನಾಂಕ:01.04.2017.
2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಎಂಡಿಎ (3) 66/ 2017–18, ದಿನಾಂಕ:30.06.2017.

**ಪ್ರಸ್ತಾವನೆ:**

ಮೇಲಿನ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ಪತ್ರ ದಿನಾಂಕ:01.04.2017ರಲ್ಲಿ ಶ್ರೀ ಭೀಮಣ್ಣಾ ಹತ್ಯಾಳ, ಲೆಕ್ಕಾಧೀಕ್ಷಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೀದರ್ ಇವರು ಕ್ಯಾನ್ಸರ್ ಕಾಯಿಲೆ ಸಂಬಂಧ ಸರ್ಕಾರದಿಂದ ಮಾನ್ಯತೆ ಹೊಂದಿದ ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ತಜ್ಞ ವೈದ್ಯರ ಸಲಹೆಯೊಂದಿಗೆ ಕರ್ನಾಟಕ ಸರ್ಕಾರದಿಂದ ಮಾನ್ಯತೆ ಹೊಂದಿರದ ಖಾಸಗಿ ಆಸ್ಪತ್ರೆಯಾದ ಹೆಲ್ತ್ ಕೇರ್ ಗ್ಲೋಬ್ ಎಂಟರ್‌ಪ್ರೈಸಸ್ ಲಿಮಿಟೆಡ್, ಸಂಪಂಗಿರಾಮನಗರ, ಬೆಂಗಳೂರು ಇಲ್ಲಿ ದಿನಾಂಕ:20.12.2016 ರಿಂದ 28.12.2016ರ ವರೆಗಿನ ಅವಧಿಯಲ್ಲಿ ಶಸ್ತ್ರಚಿಕಿತ್ಸೆ ಮಾಡಿಸಿಕೊಂಡಿದ್ದು, ಇದಕ್ಕೆ ಭರಿಸಲಾದ ವೈದ್ಯಕೀಯ ವೆಚ್ಚ ರೂ. 3,59,000/– (ಮೂರು ಲಕ್ಷದ ಐವತ್ತೊಂಭತ್ತು ಸಾವಿರ ರೂಪಾಯಿ)ಗಳನ್ನು ಮರುಪಾವತಿಸಲು ಆಡಳಿತಾತ್ಮಕ ಮಂಜೂರಾತಿ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲಿನ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ:30.06.2017ರ ಪತ್ರದಲ್ಲಿ ಶ್ರೀ ಭೀಮಣ್ಣಾ ಹತ್ಯಾಳ, ಲೆಕ್ಕಾಧೀಕ್ಷಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೀದರ್ ಇವರ ಕ್ಯಾನ್ಸರ್ ಕಾಯಿಲೆ ಸಂಬಂಧ ಕರ್ನಾಟಕ ಸರ್ಕಾರದಿಂದ ಮಾನ್ಯತೆ ಹೊಂದಿರದ ಖಾಸಗಿ ಆಸ್ಪತ್ರೆಯಾದ ಹೆಲ್ತ್ ಕೇರ್ ಗ್ಲೋಬ್ ಎಂಟರ್‌ಪ್ರೈಸಸ್ ಲಿಮಿಟೆಡ್, ಸಂಪಂಗಿರಾಮನಗರ, ಬೆಂಗಳೂರು ಇಲ್ಲಿ ಶಸ್ತ್ರಚಿಕಿತ್ಸೆ ಮಾಡಿಸಿಕೊಂಡ ಸಂಬಂಧ ವೆಚ್ಚ ಮಾಡಲಾದ ಮೊತ್ತದ ಪೈಕಿ ರೂ.64,150/– (ಅರವತ್ನಾಲ್ಕು ಸಾವಿರದ ನೂರ ಐವತ್ತು ರೂಪಾಯಿ)ಗಳನ್ನು ಅರ್ಹತಾ ಮೊತ್ತವೆಂದು ಮರುಪಾವತಿಸಬಹುದೆಂದು ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು ರವರು ಅಭಿಪ್ರಾಯ ನೀಡಿರುತ್ತಾರೆ.

ಸರ್ಕಾರವು ಸದರಿ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿದೆ. ಸರ್ಕಾರದಿಂದ ಮಾನ್ಯತೆ ಹೊಂದಿರದ ಆಸ್ಪತ್ರೆಯಾದ ಹೆಲ್ತ್ ಕೇರ್ ಗ್ಲೋಬ್ ಎಂಟರ್‌ಪ್ರೈಸಸ್ ಲಿಮಿಟೆಡ್, ಸಂಪಂಗಿರಾಮನಗರ, ಬೆಂಗಳೂರು ಇಲ್ಲಿ ಶಸ್ತ್ರ ಚಿಕಿತ್ಸೆ ಮಾಡಿಸಿಕೊಂಡ ಸಂದರ್ಭ ಮತ್ತು ಸನ್ನಿವೇಶವನ್ನು ಗಣನೆಗೆ ತೆಗೆದುಕೊಂಡು ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ, ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು ಇವರ ಶಿಫಾರಸ್ಸಿನಂತೆ ರೂ.64,150/– (ಅರವತ್ನಾಲ್ಕು ಸಾವಿರದ ನೂರ ಐವತ್ತು ರೂಪಾಯಿ)ಗಳನ್ನು ಅರ್ಹತಾ ಮೊತ್ತವೆಂದು ಶ್ರೀ ಭೀಮಣ್ಣಾ ಹತ್ಯಾಳ, ಲೆಕ್ಕಾಧೀಕ್ಷಕರು,

ಇವರಿಗೆ ಮರುಪಾವತಿಸುವುದಕ್ಕೆ ಮಂಜೂರಾತಿ ನೀಡಲು ತೀರ್ಮಾನಿಸಿದೆ. ಆದ್ದರಿಂದ ಈ ಮುಂದಿನ ಆದೇಶ.

**ಆದೇಶ ಸಂಖ್ಯೆ: ಗ್ರಾಅಪ 175 ಜಿಪಅ 2017, ಬೆಂಗಳೂರು, ದಿನಾಂಕ:30.08.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಶ್ರೀ ಭೀಮಣ್ಣಾ ಹತ್ಯಾಳ, ಲೆಕ್ಕಾಧೀಕ್ಷಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೀದರ್ ಇವರ ಕ್ಯಾನ್ಸರ್ ಕಾಯಿಲೆ ಸಂಬಂಧ ಕರ್ನಾಟಕ ಸರ್ಕಾರದಿಂದ ಮಾನ್ಯತೆ ಹೊಂದಿರದ ಖಾಸಗಿ ಆಸ್ಪತ್ರೆಯಾದ ಹೆಲ್ತ್ ಕೇರ್ ಗ್ಲೋಬ್ ಎಂಟರ್‌ಪ್ರೈಸಸ್ ಲಿಮಿಟೆಡ್, ಸಂಪಂಗಿರಾಮನಗರ, ಬೆಂಗಳೂರು ಇಲ್ಲಿ ಶಸ್ತ್ರಚಿಕಿತ್ಸೆ ಮಾಡಿಸಿಕೊಂಡ ಸಂಬಂಧ ವೆಚ್ಚ ಮಾಡಲಾದ ಮೊತ್ತದ ಪೈಕಿ ರೂ.64,150/- (ಅರವತ್ನಾಲ್ಕು ಸಾವಿರದ ನೂರ ಐವತ್ತು ರೂಪಾಯಿ)ಗಳನ್ನು ಅರ್ಹತಾ ಮೊತ್ತವೆಂದು ಮರುಪಾವತಿಸಲು ಸರ್ಕಾರವು ಮಂಜೂರಾತಿ ನೀಡಿದೆ.

ಈ ಚಿಕಿತ್ಸೆಯ ವೆಚ್ಚವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 01 ಟಿಎಫ್‌ಪಿ 2012, ದಿನಾಂಕ:20.01.2012ರನ್ವಯ ಇತರೆ ವಿಮಾ ಸಂಸ್ಥೆ, ಇತ್ಯಾಧಿ ಯಾವುದೇ ಇತರ ಮೂಲಗಳಿಂದ ಹಿಂಪಡೆದಿಲ್ಲವೆಂಬುದನ್ನು ಖಚಿತಪಡಿಸಿಕೊಳ್ಳುವ ಷರತ್ತಿಗೊಳಪಟ್ಟು ಮರುಪಾವತಿಸಬಹುದಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

30/8/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ:

1. ಮಹಾಲೇಖಪಾಲರು, (ಎ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ / ಆರ್ಥಿಕ ಇಲಾಖೆ.
3. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು.
4. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ & ನೈ ಇಲಾಖೆ, ಬೆಂಗಳೂರು – ಮೂಲ ವೈದ್ಯಕೀಯ ಬಿಲ್ಲುಗಳೊಂದಿಗೆ ನೊಂದಣಿ ಅಂಚೆ ಮೂಲಕ
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್.
7. ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೀದರ್